Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್, ಬೆಂಗಳೂರು-86,

## ದಿನಾಂಕ:-21-11-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ಹಾಗು ಹೊಸ ವಾರ್ಡ್ ಸಂಖ್ಯೆ:51ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/54/2022-23 ದಿನಾಂಕ:18-11-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ಕೇಶವ ಮೂರ್ತಿ | ಸಹಾಯಕ ನಿರ್ದೇಶಕರು ನಗರ ಯೋಜನೆ, ಬಿ.ಬಿ.ಎಂ.ಪಿ. |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರರು, ವಾರ್ಡ-67. |
| 3. | ಶ್ರೀ. ಉದಯಶಂಕರ್ | 1ನೇ ಆರ್ ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗು ವಾರ್ಡ್ ಸಮಿತಿ ಸದಸ್ಯರು. |
| 4. | ಶ್ರೀ. ರಾಮಚಂದ್ರ | 1ನೇ ಎನ್ ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗು ವಾರ್ಡ್ ಸಮಿತಿ ಸದಸ್ಯರು. |
| 5. | ಶ್ರೀಮತಿ. ಗೀತಾ ಕಿನಾಲ್ | ವಾರ್ಡ್ ಸಮಿತಿ ಸದಸ್ಯರು. |
| 6. | ಶ್ರೀ. ರಂಗರಾಜು | ವಾರ್ಡ್ ನಾಗರೀಕರು. |
| 7. | ಶ್ರೀ. ಬಿ.ಎಸ್ ರಾಮಾನಾಥ್ | ವಾರ್ಡ್ ನಾಗರೀಕರು. |
| 8. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್-67. |
| 9. | ಶ್ರೀ. ಮಂಜುನಾಥ್. | ತೋಟಗಾರಿಕೆ ಇಲಾಖೆ, ಮೇಸ್ತ್ರೀ. |
| 10. | ಶ್ರೀ. ರಾಜೇಶ್ | ಕಂದಾಯ ಪರೀವಿಕ್ಷಕರು. |
| 11. | ಶ್ರೀ. ಗಿರೀಶ್ | ಕೆಲಸ ಪರಿವಿಕ್ಷಕರು, ಬೆ.ಒ.ಮಂ |
| 12. | ಶ್ರೀ. ಕೆ.ವಿ ಲೋಕೇಶ್ | ಪಶು ಕೆಲಸ ವಿಭಾಗ. |
| 13. | ಶ್ರೀ. ಶಿವಕುಮಾರ್ | ಸಹಾಯಕ ಪೋಲೀಸ್ ಇನ್ಸ್‌ಪೆಕ್ಟರ್ ಮಹಾಲಕ್ಷ್ಮೀಪುರಂ ಪೋಲಿಸ್ ಠಾಣೆ. |
| 14. | ಶ್ರೀ. ಗುರುಮೂರ್ತಿ | ಫ.ತ್ಯಾನಿ ಪರೀವಿಕ್ಷಕರು. |
| 15. | ಸಹಾಯಕ ಅಭಿಯಂತರರು, ಬೋರ್ವೆಲ್ ನಿರ್ವಹಣೆ. | ಗೈರು ಹಾಜರಿ. |
| 16. | ಕಿರಿಯ ಆರೋಗ್ಯ ಪರೀವಿಕ್ಷಕರು | ಗೈರು ಹಾಜರಿ. |
| 17. | ಸುಬ್ರಮಣ್ಯನಗರ ಪೋಲಿಸ್ ಠಾಣೆ. | ಗೈರು ಹಾಜರಿ. |



ಮು.ತಿ.ನೋ.

| | | |
|---|---|---|
| 18. | ರಾಜಾಜಿನಗರ ಪೋಲಿಸ್ ಠಾಣೆ. | ಗೈರು ಹಾಜರಿ. |
| 19. | ಮಲ್ಲೇಶ್ವರಂ ಪೋಲಿಸ್ ಠಾಣೆ. | ಗೈರು ಹಾಜರಿ. |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಸೆಪ್ಟೆಂಬರ್ ಮಾಹೆಯ ದಿ: 21/11/2022 ರಂದು ಬೆಳ್ಳಿಗೆ 9:30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

| | |
|---|---|
| ಶ್ರೀ. ಉದಯಶಂಕರ್ 1ನೇ ಆರ್ ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗು ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ 'ಆರ್' ಬ್ಲಾಕ್‌ನಲ್ಲಿ ಎರಡು ರಸ್ತೆಗಳಿಗೆ ರ್‍ಯಾಂಪ್ ಮಾಡಬೇಕು ಕಾರುಗಳು ಓಡಾಡಲು ತೊಂದರೆ ಉಂಟಾಗುತ್ತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ಸಮಿತಿ ಸದಸ್ಯರು ತಿಳಿಸಿರುವಂತೆ ವಾರ್ಡ್‌ನ ರಾಜಾಜಿನಗರ 1ನೇ 'ಆರ್' ಬ್ಲಾಕ್‌ನಲ್ಲಿ ರಸ್ತೆಗಳಿಗೆ ರ್‍ಯಾಂಪ್ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಾಮಚಂದ್ರ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ಹರೆ ಕೃಷ್ಣ ಉದ್ಯಾನದಲ್ಲಿ ಗೇಟ್ ಇಲ್ಲದ ಕಾರಣ ಆದ್ದರಿಂದ ರಾತ್ರಿ ವೇಳೆ ಸಾರ್ವಜನಿಕರು ದುರೂಪಯೋಗ ಪಡೆಸುತ್ತಿರುತ್ತಾರೆ ಉದ್ಯಾನದಲ್ಲಿ ಗೇಟ್ ಅಳವಡಿಸಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ರಂಗರಾಜು ವಾರ್ಡ್ ನಾಗರೀಕರು. | ವಾರ್ಡ್‌ನ 7ನೇ ಅಡ್ಡರಸ್ತೆ ಆಟದ ಮೈದಾನದಲ್ಲಿ ಲೈಟ್ ಅಳವಡಿಸಬೇಕು ಮತ್ತು ವ್ಯಾಯಾಮ ಮಾಡುವ ಉಪಕರಣಗಳನ್ನು ಅಳವಡಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ಸಮಿತಿ ಸದಸ್ಯರು ತಿಳಿಸಿರುವಂತೆ 7ನೇ ಅಡ್ಡರಸ್ತೆ ಆಟದ ಮೈದಾನದ ದೂರಿಗೆ ಸಂಭಂದಿಸಿದಂತೆ ಸಹಾಯಕ ಅಭಿಯಂತರರು (ವಿದ್ಯುತ್) ರವರು ಕ್ರಮವಹಿಸಲು ಸಭೆಯಲ್ಲಿ ತಿಳಿಸಿದರು. ಹಾಗು ಆಟದ ಮೈದಾನವು ಕಿರಿದಾಗಿರುವುದರಿಂದ ವ್ಯಾಯಾಮ ಮಾಡುವ ಉಪಕರಣಗಳನ್ನು ಅಳವಡಿಸಲು ಸ್ಥಳಾವಕಾಶವಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀಮತಿ. ಗೀತಾ ಕಿನಾಲ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಎನ್ ಬ್ಲಾಕ್‌ನ 19ನೇ ಸಿ.ಡಿ.ಇ ಮೈನ್‌ನಲ್ಲಿ ರಸ್ತೆ ಚರಂಡಿಗಳಲ್ಲಿ ಹೂಳು ತುಂಬಿರುತ್ತದೆ ಮತ್ತು ರಸ್ತೆಗಳ ಡಾಂಬರೀಕರಣ ಮಾಡುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ರಾಜಾಜಿನಗರ 1ನೇ ಎನ್ ಬ್ಲಾಕ್‌ನ 19ನೇ ಸಿ.ಡಿ.ಇ ಮೈನ್‌ನ ರಸ್ತೆ ಹೂಳು ತೆಗೆಯುವುದು ಹಾಗು ರಸ್ತೆಗಳ ಡಾಂಬರೀಕರಣ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಾಮಚಂದ್ರ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ಗಣೇಶ ದೇವಾಲಯದ ಹಿಂಭಾಗದ ಆಟದ ಮೈದಾನದ ಕಾಮಗಾರಿಯು ಪ್ರಗತಿಯಲ್ಲಿದ್ದು ಶೀಘ್ರವಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು. |



ಮು.ತಿ.ನೋ.

| | |
|---|---|
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ್–67 | ವಾರ್ಡ್‌ನ ಸಮಿತಿ ಸದಸ್ಯರ ದೂರಿನಂತೆ ಕ್ರಮವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಂಗರಾಜು ವಾರ್ಡ್ ನಾಗರೀಕರು. | ವಾರ್ಡ್‌ನ ರಾಜಾಜಿನಗರ 1ನೇ ಎನ್ ಬ್ಲಾಕ್‌ನ ವಿದ್ಯಾವರ್ಧಕ ಶಾಲೆ ರಸ್ತೆಯ ಎರಡು ಭದಿಯಲ್ಲಿ ವಾಹನ ನಿಲುಗಡೆ ಮಾಡುತ್ತಿರುತ್ತಾರೆ ಇದರಿಂದ ವಾಹನ ಸವಾರರಿಗೆ ಬಹಳ ತೊಂದರೆ ಉಂಟಾಗುತ್ತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀಮತಿ. ಗೀತಾ ಕಿನಾಲ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಕೆ ಬ್ಲಾಕ್‌ನ ಆಂಜನೇಯ ದೇವಾಲಯದ ರಸ್ತೆಯ ಎರಡು ಭದಿಯಲ್ಲಿ ವಾಹನ ನಿಲುಗಡೆ ಮಾಡುತ್ತಿರುತ್ತಾರೆ ಇದರಿಂದ ವಾಹನ ಸವಾರರಿಗೆ ಬಹಳ ತೊಂದರೆ ಉಂಟಾಗುತ್ತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಮಲ್ಲೇಶ್ವರಂ ಸಂಚಾರಿ ಪೊಲೀಸ್ ಠಾಣೆಯವರು ಎರಡು ದೂರುಗಳಿಗೆ ಕ್ರಮವಹಿಸುವಂತೆ ಸಭೆಯಲ್ಲಿ ಸೂಚಿಸಿದರು. |
| ಶ್ರೀ. ರಂಗರಾಜು ವಾರ್ಡ್ ನಾಗರೀಕರು. | ವಾರ್ಡ್‌ನ ಹೋಟೆಲ್‌ಗಳಲ್ಲಿ ಕಡ್ಡಯಾವಾಗಿ ಮಾಸ್ಕ್ ಮತ್ತು ಗ್ಲೋಸ್‌ಗಳನ್ನು ದರಿಸಬೇಕೆಂದು ಸಭೆಯಲ್ಲಿ ಸೂಚಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿನಂತೆ ವಾರ್ಡ್‌ನ ಹಿರಿಯ ಆರೋಗ್ಯ ಪರೀವಿಕ್ಷಕರು ಕ್ರಮವಹಿಸುವಂತೆ ಸೂಚಿಸಿದರು. |
| ಶ್ರೀ. ರಂಗರಾಜು ವಾರ್ಡ್ ನಾಗರೀಕರು. | ಘನತ್ಯಾಜ್ಯ ನಿರ್ವಹಣೆಯ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ಘನತ್ಯಾಜ್ಯ ನಿರ್ವಹಣೆ ನಿಯಮ 2016ರ ಪ್ರಕಾರ ಕಸವನ್ನು ಮೂಲದಲ್ಲಿಯೇ ವಿಂಗಡಿಸಬೇಕು ಪ್ರತಿ ಮನೆಯಲ್ಲಿಯೂ 3 (ಹಸಿರು, ನೀಲಿ, ಕೆಂಪು) ರೀತಿಯ ಕಸದ ಬುಟ್ಟಿಗಳನ್ನು ಇಟ್ಟರಬೇಕು.<br>**ಹಸಿರು ಬುಟ್ಟಿಯಲ್ಲಿ:** ಸೊಪ್ಪು, ತರಕಾರಿ, ಹಣ್ಣುಗಳು ಮತ್ತು ಅಡುಗೆ ವೇಸ್ಟ್ (ಗೊಬ್ಬರ ಮಾಡಬಹುದಾದ ವಸ್ತುಗಳು)<br>**ನೀಲಿ ಬುಟ್ಟಿಯಲ್ಲಿ:** ಕಾಗದಗಳು, ಪ್ಲಾಸ್ಟಿಕ್‌ಗಳು, ಗಾಜುಗಳು, ಎಲೆಕ್ಟ್ರಾನಿಕ್ ವಸ್ತುಗಳು ಹಾಗು ಇತ್ಯಾದಿ. (ಮರುಬಳಕೆ ಮಾಡಬಹುದಾದ ವಸ್ತುಗಳು)<br>**ಕೆಂಪು ಬುಟ್ಟಿಯಲ್ಲಿ:** ಡೈಪರ್‌ಗಳು, ಬ್ಲೇಡುಗಳು,ಪ್ಯಾಡ್‌ಗಳು, ರಾಸಾಯನಿಕ ವಸ್ತುಗಳು,ಮತ್ತು ಇತ್ಯಾದಿ (ಅಪಾಯಕಾರಿ ತ್ಯಾಜ್ಯಗಳು )<br>ಕಸವನ್ನು ಎಲ್ಲೆಂದರಲ್ಲಿ ಬಿಸಾಡಬಾರದು, ಆಟೋಚಾಲಕರು ಮತ್ತು ಸಹಾಯಕರು ಮನೆ ಬಾಗಲಿಗೆ ಬಂದಾಗ ಕಸವನ್ನು ಬೇರ್ಪಡಿಸಿ ನೀಡಬೇಕು, ಪ್ಲಾಸ್ಟಿಕ್‌ನ್ನು ಪೂರ್ಣ ಪ್ರಮಾಣದಲ್ಲಿ ಬಳಸಬಾರದು. ಇದು ಆರೋಗ್ಯಕ್ಕೆ ಹಾನಿಕರಾಕ, ಹಸಿಕಸವನ್ನು ಮನೆಯ ಅಂಗಳದಲ್ಲಿಯೇ ಕಾಂಪೋಸ್ಟಿಂಗ್ ಮಾಡಿ ಗಿಡಗಳಿಗೆ ಹಾಕಬೇಕು ಎಂದು ಸಭೆಯಲ್ಲಿ ಮಾಹಿತಿ ಒದಗಿಸಿದರು. |
| ಶ್ರೀಮತಿ. ಗೀತಾ ಕಿನಾಲ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ನೂತನ ಕಟ್ಟಡ ನಿರ್ಮಾಣ ಮಾಡುತ್ತಿರುವ ಜಾಗಗಳಲ್ಲಿ Fogging ಮಾಡಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಗಂಗಯ್ಯ ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್–67. | ವಾರ್ಡ್‌ನ ಸಮಿತಿ ಸದಸ್ಯರ ದೂರಿನಂತೆ Fogging ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು. |



ಪು.ತಿ.ನೋ.

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್-67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನು ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Ravi 28/1/22

ಕಾರ್ಯದರ್ಶಿ ಹಾಗೂ
**ಸಹಾಯಕ ಅಭಿಯಂತರರು, ವಾರ್ಡ್- 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಅಧ್ಯಕ್ಷರು ಹಾಗೂ
**ನೋಡಲ್ ಅಧಿಕಾರಿಗಳು ವಾರ್ಡ್- 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**



ಮು.ತಿ.ನೋ.